ತಾಲ್ಲೂಕು.		ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳದ ಹೆಸರು.
ಮದ್ದಗಿರಿ	...	ಹೊಳವನಹಳ್ಳಿ
ಮಂಜರಾಬಾದ್	..	ವುದೇವಾರ
ಡಿಟೋ	..	ಮಾರ್ನಹಳ್ಳಿ
ತುಮಕೂರು	..	ಬೆಳಧರ

ಬಿ. ಮರಿಗಂಗಯ್ಯ,
ಅಂಚೇ ಬಕ್ಷಿ.

ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜೀಯವರ ಕೋರ್ಟಿನಲ್ಲಿ.

1887ನೇ ಇಸವಿ ಮಿಸಲೇನಿಯಸ್ ಅರ್ಜಿ ನಂಬರ್.

ನೆಲಮಂಗಲ ತಾಲ್ಲೂಕು ಬೇಗೂರಲ್ಲಿದ್ದು ಮೃತಪಟ್ಟ ಹನುಮಯ್ಯನ ಆಸ್ತೀ ವಿಷಯದಲ್ಲಿ—

ಅರ್ಜಿದಾರಳು ಡಿಟೋ ಬೇಗೂರಲ್ಲಿ ಇರುವ ತೆಲಗರ ಹನುಮಯ್ಯನ ಹೆಂಡತಿ ರಂಗಮ್ಮ, ಮೃತಪಟ್ಟ ಸದರೀ ಹನುಮಯ್ಯನಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಬೇಗೂರು ಸ್ಥಳದ ರಂಗಮ್ಮನು ಸದರೀ ವಾಸಸ್ಥನಾಗಿ ಮೃತಪಟ್ಟ ಹನುಮಯ್ಯನ ಜಿಂದಗಿ ಬಗ್ಯಾಗಿ ಬರತಕ್ಕ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ರಂಗಮ್ಮನ ಅರ್ಜಿಯನ್ನು 1887ನೇ ಇಸವಿ ಜುಲೈ ತಿಂಗಳು ತಾರೀಖು 29ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಹನುಮಯ್ಯನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಮಿ|| ಅರ್ಜೀ ನಂಬರ್ 571.

ಚಿಕ್ಕಬಳ್ಳಾಪುರ ತಾಲ್ಲೂಕು ಕಳವರದಲ್ಲಿದ್ದು ಮೃತಪಟ್ಟ ಮಂಚಗಾನಹಳ್ಳಿ ನರಸಂಣನ ಆಸ್ತೀ ವಿಷಯದಲ್ಲಿ—

ಅರ್ಜೀದಾರಳು ಡಿಟೋ ಕಳವರದಲ್ಲಿ ಇರುವ ಮಂಚಗಾನಹಳ್ಳಿ ನರಸಂಣನ ಮಗಳು ನರಸಮ್ಮ, ಮೃತಪಟ್ಟ ಸದರೀ ನರಸಂಣನಿಗೆ ಮಗಳು ಆಗಬೇಕೆಂಬ ಹಕ್ಕುದಾರೀ ಮೇಲೆ ಕಳವರ ಸ್ಥಳದ ನರಸಮ್ಮನು ಡಿಟೋ ವಾಸಸ್ಥನಾಗಿ ಮೃತಪಟ್ಟ ನರಸಂಣನ ಜಿಂದಗಿ ಬಗ್ಯಾಗಿ ಬರತಕ್ಕ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ನರಸಮ್ಮನ ಅರ್ಜಿಯನ್ನು 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 12ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನರಸಂಣನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಯಿದರಿಂದ ತಿಳಿಯಪಡಿಸಿ ಯಿದೆ.

1887ನೇ ಇಸವಿ ಜುಲೈ ತಿಂಗಳು 13ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1887ನೇ ಇಸವಿ ಮಿ|| ಅರ್ಜೀ ನಂಬರ್ 573.

ಬೆಂಗಳೂರು ತಾಲ್ಲೂಕು ವರ್ತೂರಲ್ಲಿದ್ದು ಮೃತಪಟ್ಟ ಬಾಲಪ್ಪನ ಆಸ್ತೀ ವಿಷಯದಲ್ಲಿ—

ಅರ್ಜೀದಾರಳು ಡಿಟೋ ವರ್ತೂರಲ್ಲಿರುವ ಮುನಿಯಕ್ಕ, ಮೃತಪಟ್ಟ ಸದರೀ ಬಾಲಪ್ಪನಿಗೆ ತಾಯಿ ಆಗಬೇಕೆಂಬ ಹಕ್ಕುದಾರೀ ಮೇಲೆ ವರ್ತೂರು ಸ್ಥಳದ ಮುನಿಯಕ್ಕನು ಸದರೀ ವಾಸಸ್ಥನಾಗಿ ಮೃತಪಟ್ಟ ಬಾಲಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಮುನಿಯಕ್ಕನ ಅರ್ಜೀಯನ್ನು 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 5ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಬಾಲಪ್ಪನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಯಿದೆ.

1887ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 598.

ಚನ್ನಪಟ್ಟಣದ ಕಸಬಾ ಹೋಬಳಿ ಮೈನಾಯ್ಕನ ಹೊಸಹಳ್ಳಿಲಿದ್ದ ಮೃತಪಟ್ಟ ಮಾದೇಗವುಡನ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಡಿಟೋ ಹೊಸಹಳ್ಳಿಲಿರುವ ಕೆಂಪೆಗೌಡನಮಗ ದೊಡ್ಡೇಗೌಡ ವುರಫ್ ಮೂಗೇಗೌಡ, ಡಿಟೋ ಸ್ಥಳದಲ್ಲಿ ಮೃತಪಟ್ಟ ಸದರೀ ಮಾದೆಗೌಡನಿಗೆ ಅಂಣ ಆಗಬೇಕೆಂಬ ಹಕ್ಕುದಾರೀ ಮೇಲೆ ಹೊಸಹಳ್ಳಿ ಸ್ಥಳದ ಮೂಗೇಗೌಡನು ಸದರೀ ವಾಸಸ್ಥನಾಗಿ ಮೃತಪಟ್ಟ ಮಾದೇಗೌಡನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿ ಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಮೂಗೇಗೌಡನ ಅರ್ಜೀಯನ್ನು 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 5ರಲ್ಲಿ ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮಾದೇಗೌಡನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿದೆ.

1887ನೇ ಇಸವಿ ಜುಲೈ ತಿಂಗಳು 21ನೇ ತಾರೀಖಿನಲ್ಲಿ ಕೋರ್ಟು ಮೊಹರಸಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕೈಸ್,
ಸಬ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್‌ರವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 331.

ಮೃತಪಟ್ಟ ಸುಬ್ಬರಾಯರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಸುಬ್ಬರಾಮಯ್ಯ ಮೈನರ್, ಗಾರ್ಡಿಯ್ ಕೃಷ್ಣಪ್ಪನವರು, ಮೃತಪಟ್ಟ ಸದರೀ ಸುಬ್ಬರಾಯರಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಲಷ್ಕರ್ ಮೊಹಲಾ ಸ್ಥಳದ ಸದರೀ ಕೃಷ್ಣಪ್ಪನವರು ಸದರೀ ವಾಸಸ್ಥರಾಗಿ ಮೃತಪಟ್ಟ ಸುಬ್ಬರಾಯರ ಜಿಂದಗಿ ಬಗ್ಯಾಗಿ ಬರತಕ್ಕ 150 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕೃಷ್ಣಪ್ಪನವರ ಅರ್ಜೀಯನ್ನ 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 19ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬರಾಯರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 347.

ಮೃತಪಟ್ಟ ಆಸ್ವತ್ಥೇಲಿಂಗಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ನಾಗಯ್ಯನು, ಮೃತಪಟ್ಟ ಸದರೀ ಆಸ್ವತ್ಥೇಲಿಂಗಯ್ಯನವರಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ದೇವರಾಜ ಮೊಹಲಾ ಸ್ಥಳದ ಸದರಿ ನಾಗಯ್ಯನು ಸದರೀ ವಾಸಸ್ಥರಾಗಿ ಮೃತಪಟ್ಟಆಸ್ವತ್ಥೇಲಿಂಗಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ನಾಗಯ್ಯನ ಅರ್ಜಿಯನ್ನು 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 29ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಆಸ್ವತ್ಥೇಲಿಂಗಯ್ಯನವರ ಆಸ್ತಿಗೆ ಹಕ್ಕುದಾರರಾದವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಜುಲೈ ತಿಂಗಳು 20ನೇ ತಾರೀಖಿನಲ್ಲಿ ಕೋರ್ಟು ಮೊಹರಸಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.